**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವಿ ಸಂಕನೂರ ಹಾಗೂ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಇವರ ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು.**

*****

ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಕೋವಿಡ್ -19 ಅವಧಿಯ ನಂತರ ಶೈಕ್ಷಣಿಕ ವರ್ಷ ಜೂನ್‌ದಿಂದ ಪ್ರಾರಂಭವಾಗುವ ಬದಲಾಗಿ ಆಗಸ್ಟ /ಸೆಪ್ಟಂಬರ್‌ನಲ್ಲಿ ಪ್ರಾರಂಭವಾಗುವ ಕೆಟ್ಟ ಪರಿಸ್ಥಿತಿ ಬಂದಿರುವುದನ್ನು ಸರಿಪಡಿಸಲು ಕ್ರಮಕೈಗೊಳ್ಳುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಸರ್ಕಾರದ ಉತ್ತರ:**

UGC ಯು ತನ್ನ ಪತ್ರ ಸಂಖ್ಯೆ: DO 14-08/2020 (CPP-II), ದಿನಾಂಕ: 05.11.2020 ರಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ತರಗತಿ ಮತ್ತು ಪರೀಕ್ಷೆಗಳನ್ನು ನಡೆಸುವ ಕುರಿತಂತೆ, ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಅದರನ್ವಯ 2020-21ನೇ ಸಾಲಿನ ಶೈಕ್ಷಣಿಕ ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸಲು ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕೋವಿಡ್-19 ಸೋಂಕು ಹರಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ UGC ಮಾರ್ಗಸೂಚಿಯಲ್ಲಿ ತಿಳಿಸಲಾಗಿತ್ತು.

ಯುಜಿಸಿ ನಿರ್ದೇಶನದನುಸಾರ ಉನ್ನತ ಶಿಕ್ಷಣ ಇಲಾಖೆಯು ತನ್ನ ಆದೇಶ ಸಂಖ್ಯೆ: ಇಡಿ 334 ಯುಎನ್‌ಇ 2020, ದಿನಾಂಕ: 09.11.2020ರಲ್ಲಿ ದಿನಾಂಕ: 17.11.2020 ರಿಂದ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು/ಖಾಸಗಿ ವಿಶ್ವವಿದ್ಯಾಲಯಗಳು/ಸರ್ಕಾರಿ/ತಾಂತ್ರಿಕ/ ಡಿಪ್ಲೊಮಾ/ಅನುದಾನ ರಹಿತ ಕಾಲೇಜುಗಳು UGC ಯು ತನ್ನ ಪತ್ರ ಸಂಖ್ಯೆ: DO 14-08/2020 (CPP-II), ದಿನಾಂಕ: 05.11.2020 ರಲ್ಲಿನ ಮಾರ್ಗಸೂಚಿಗಳನ್ನು ಪಾಲಿಸುವಂತೆ ಆದೇಶ ಹೊರಡಿಸಲಾಗಿರುತ್ತದೆ.

ಕೋವಿಡ್ -19 ಸಮಸ್ಯೆಯಿಂದಾಗಿ ತರಗತಿಗಳನ್ನು ಆನ್‌ಲೈನ್ ಮೂಲಕ ನಡೆಸಿ ಪರೀಕ್ಷೆಗಳನ್ನು ನಿಗದಿತ ಸಮಯದಲ್ಲಿ ನಡೆಸುವ ಪ್ರಕ್ರಿಯೆಯಲ್ಲಿ ವ್ಯತ್ಯಾಸವಾಗಿದ್ದು, ಯುಜಿಸಿ ನಿರ್ದೇಶನದನುಸಾರ ರಾಜ್ಯ ಸರ್ಕಾರವು ಕ್ರಮವಹಿಸಿರುತ್ತದೆ. ಮುಂದುವರೆದು, 2022-23ನೇ ಸಾಲಿನ ತರಗತಿಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ 01.09.2022ರಿಂದ ಪ್ರಾರಂಭವಾಗುವಂತೆ ಮತ್ತು ಪದವಿ ಕಾಲೇಜುಗಳಲ್ಲಿನ ಪ್ರವೇಶಾತಿ ಪ್ರಕ್ರಿಯೆಯನ್ನು ಸೆಪ್ಟಂಬರ್ -15 , 2022ರವರೆಗೆ ವಿಸ್ತರಿಸಲಾಗಿರುತ್ತದೆ. 2023-24ನೇ ಸಾಲಿನಲ್ಲಿ ಪದವಿ ಪೂರ್ವ ಪರೀಕ್ಷೆಗಳ ಪೂರಕ ಫಲಿತಾಂಶ ಘೋಷಣೆ ಹಾಗೂ 2023ನೇ ಸಾಲಿನ ವಿಧಾನಸಭಾ ಸಾರ್ವತ್ರಿಕ ಚುನಾವಣೆಯ ಪ್ರಯುಕ್ತ ಪ್ರಾಧ್ಯಾಪಕರು ಮತ್ತು ಆಡಳಿತ ಸಿಬ್ಬಂದಿಗಳನ್ನು ಚುನಾವಣಾ ಕಾರ್ಯಕ್ಕೆ ನಿಯೋಜಿಸಿದ್ದ ಕಾರಣಗಳ ಹಿನ್ನಲೆಯಲ್ಲಿ ಸ್ನಾತಕ ಶೈಕ್ಷಣಿಕ ವೇಳಾಪಟ್ಟಿಯನ್ನು ಪ್ರಾರಂಭಿಕವಾಗಿ ಮೇ ತಿಂಗಳಿನಲ್ಲಿ ನಿಗಧಿಗೊಳಿಸಲಾಗಿದ್ದು ತದನಂತರ ಜುಲೈ ,2023ರವರೆಗೆ ವಿಸ್ತರಿಸಲಾಗಿರುತ್ತದೆ ಹಾಗೂ ಸ್ನಾತಕೋತ್ತರ ಪದವಿ ಕಾರ್ಯಕ್ರಮ ವೇಳಾಪಟ್ಟಿಯನ್ನು ಸೆಪ್ಟಂಬರ್ 2023ರಲ್ಲಿ ನಿಗಧಿಪಡಿಸಲಾಗಿರುತ್ತದೆ (ಆದೇಶ ಸಂಖ್ಯೆ:ಇಡಿ 80 ಯುಎನ್ 2023 , ದಿನಾಂಕ:17.07.2023 ಮತ್ತು ದಿನಾಂಕ:25.05.2023 ಪ್ರತಿ ಲಗತ್ತಿಸಿದೆ.)

ಈ ಹಿಂದಿನ ಶೈಕ್ಷಣಿಕ ಸಾಲುಗಳಲ್ಲಿ ಪದವಿ ಪ್ರವೇಶಾತಿ ಸಂಬಂಧ ಜರುಗಿದ ವಿಳಂಬವನ್ನು ಸರಿಪಡಿಸಿಕೊಂಡು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಪ್ರಸಕ್ತ ಸಾಲಿನಲ್ಲಿ ಅಂದರೆ 2024-25ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ದಿನಾಂಕ:08.07.2024ರಿಂದ ಪ್ರಾರಂಭವಾಗುವಂತೆ ಸರ್ಕಾರದ ಆದೇಶ ಸಂಖ್ಯೆ: ಇಡಿ 201 ಯುಎನ್‌ಇ 2023 , ದಿನಾಂಕ:11.06.2024ರಂದು ಆದೇಶಿಸಲಾಗಿರುತ್ತದೆ. ಮುಂದುವರೆದು ಕಾಲೇಜುಗಳ ಸಂಯೋಜನಾ ಪ್ರಕ್ರಿಯೆಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಸ್ನಾತಕ ಪದವಿಯಯ ಶೈಕ್ಷಣಿಕ ವೇಳಾಪಟ್ಟಿಯನ್ನು ದಿನಾಂಕ:13.07.2024ರವರೆಗೆ ವಿಸ್ತರಿಸಲಾಗಿರುತ್ತದೆ ಎಂಬ ಮಾಹಿತಿಯನ್ನು ಈ ಮೂಲಕ ತಿಳಿಸಲಿಚ್ಛಿಸುತ್ತೇನೆ.

*************

ಇಡಿ 143 ಯುಎನ್‌ಇ 2024

**(ಡಾ.ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು